**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ , ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ : 2722/2024**
**ಚಾಸಾ - 19** / ಪ್ರಾಸಾ- 5

| | |
|---|---|
| ಹೆಸರು | ಜೋಗಪ್ಪ |
| ತಂದೆಯ ಹೆಸರು | ಗೊಳ್ಳಯ್ಯ |
| ವಯಸ್ಸು | 41 |
| ಉದ್ಯೋಗ | ಮುಖ್ಯ ಪೇದೆ , ತಾವರೆಕೆರೆ ಪೊ. ಠಾಣೆ |
| ವಿಳಾಸ | ಬಿಡದಿ |

**ದಿನಾಂಕ:16-10-2025ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ-**

ನಾನು ದಿ.08-08-2023 ರಿಂದ ಇಲ್ಲಿಯವರೆಗೆ ತಾವರೆಕೆರೆ ಪೋಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ 29-03-2024 ರಂದು ಸಂಜೆ 5.45 ಗಂಟೆಯ ಸಮಯದಲ್ಲಿ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ದೂರನ್ನು ನೀಡಿದ ಮೇರೆಗೆ ಠಾಣಾ ಮೊಕದ್ದಮೆ ನಂ. 94/2024 ಎಂದು ನಮೂದಿಸಲಾಯಿತು. ಸದರಿ ಮೊಕದ್ದಮೆ ನಂ. ಕಲಂ 279, 337 ಮತ್ತು 304-ಎ ಐಪಿಸಿ ಯ ರೀತ್ಯ ಪ್ರಕರಣ ದಾಖಲು ಮಾಡಲಾಯಿತು. ಈಗ ಸಾಕ್ಷಿಗೆ ನಿಪಿ-1ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸದರಿ ದೂರಿನ ಮೇರೆಗೆ ಪ್ರಥಮ ವರ್ತಮಾನ ವರದಿಯನ್ನು ಮಾಡಲಾಯಿತು. ಈಗ ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-28 ಸಾಕ್ಷಿಯ ಸಹಿಯನ್ನು ನಿಪಿ-28(ಎ) ಎಂದು ಗುರುತಿಸಲಾಯಿತು. ನಂತರ ಹೆಚ್ಚಿನ ತನಿಖೆಗಾಗಿ ಕಡತವನ್ನು ಚಾಸಾ-20 ರವರಿಗೆ ವರ್ಗಾವಣೆ ಮಾಡಲಾಯಿತು.

**ಪಾಟೀ ಸವಾಲು- ಆರೋಪಿಯ ಪರ ಶ್ರೀ. ಎನ್. ಜಿ ವಕೀಲರಿಂದ -**

ಚಾಸಾ-1ರವರು ಠಾಣೆಗೆ ಬಂದಿರುವುದಿಲ್ಲ ಮತ್ತು ನಿಪಿ-1ರಂತೆ ಯಾವುದೇ ದೂರನ್ನು ನೀಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಮೃತರ ಕುಟುಂಬಕ್ಕೆ ಸಹಾಯ ಮಾಡುವ ಉದ್ದೇಶದಿಂದ ನೀವು ಚಾಸಾ-1ರವರಿಂದ ಸುಳ್ಳು ದೂರನ್ನು ಸ್ವೀಕರಿಸಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ**